## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಟಿ.ಎನ್. ಮೂರ್ತಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಕಡೂರು ಚಿಕ್ಕಮಗಳೂರು ಜಿಲ್ಲೆ ಮತ್ತು ಇತರರ ವಿರುದ್ಧದ ಜಂಟಿ ಇಲಾಖಾ ವಿಚಾರಣೆ ಜರುಗಿಸಲು ವಿಚಾರಣಾಧಿಕಾರಿ ಮತ್ತು ಮಂಡನಾಧಿಕಾರಿಯನ್ನು ನೇಮಿಸುವ ಕುರಿತು ಆದೇಶ

ಓದಲಾಗಿದೆ: 1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ. ಜಿಲ್ಲಾ ಪಂಚಾಯತಿ, ಚಿಕ್ಕಮಗಳೂರು ಇವರ ಪತ್ರ ಸಂಖ್ಯೆ: ಜಿಪಂಚಿ/ಆ-3/ಗ್ರಾಪಂ/ಸಿಸಿಎ/02/2012-13 ದಿ.8.4.2013

2. ಸರ್ಕಾರದ ಕಾರಣ ಕೇಳುವ ನೋಟೀಸು ದಿನಾಂಕ: 06-02-2014

3. ಆಪಾದಿತರು ಸಲ್ಲಿಸಿರುವ ಲಿಖಿತ ಹೇಳಿಕೆಗಳು.

------

ಪ್ರಸ್ತಾವನೆ:

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಪತ್ರದಲ್ಲಿ ಕಡೂರು ತಾಲ್ಲೂಕು ಹಿರೇನಲ್ಲೂರು ಗ್ರಾಮ ಪಂಚಾಯತಿಯಲ್ಲಿ ಕುಡಿಯುವ ನೀರಿನ ಯೋಜನೆಯಡಿ ಮತ್ತು ಎಂಜಿಎನ್‌ಆರ್‌ಇಜಿಎ ಯೋಜನೆಯ ಕಾಮಗಾರಿಗಳ ಅನುಸ್ಠಾನದಲ್ಲಿ ಅವ್ಯವಹಾರ/ಹಣ ದುರುಪಯೋಗ ಪ್ರಕರಣದಲ್ಲಿ ಭಾಗಿಯಾಗಿರುವರೆನ್ನಲಾದ ಈ ಕೆಳಕಂಡ ಅಧಿಕಾರಿ/ನೌಕರರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ. ಜಿಲ್ಲಾ ಪಂಚಾಯತಿ, ಚಿಕ್ಕಮಗಳೂರು ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

1. ಶ್ರೀ ಟಿ.ಎನ್. ಮೂರ್ತಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಪಂ., ಕಡೂರು
2. ಶ್ರೀ ಶಂಕರ್ ನಾಯಕ್, ಹಿಂದಿನ ಸಕಾಇಂ. ಪಂ. ರಾಜ್ ಇಂ. ಉಪ ವಿಭಾಗ ಕಡೂರು
3. ಡಾ: ನಂದಾ, ಹಿಂದಿನ ಆಡಳಿತಾಧಿಕಾರಿ, ಗ್ರಾಮ ಪಂಚಾಯತಿ; ಹಿರೇನಲ್ಲೂರು, ಕಡೂರು ತಾಲ್ಲೂಕು
4. ಶ್ರೀ ಎ. ನಾಗರಾಜ್ ಹಿಂದಿನ ಕಿ. ಅ. ಪಂ.ರಾಜ್ ಇಂ. ಉಪ ವಿಭಾಗ, ಕಡೂರು
5. ಶ್ರೀ ದೇವೆಂದ್ರಪ್ಪ, ಹಿಂದಿನ ಕಿ. ಅ. ಪಂ.ರಾಜ್ ಇಂ. ಉಪ ವಿಭಾಗ, ಕಡೂರು
6. ಶ್ರೀ ಮಹೇಶ್ವರಪ್ಪ, ಹಿಂದಿನ ಗ್ರಾಪಂ ಕಾರ್ಯದರ್ಶಿ, ಹಿರೇನಲ್ಲೂರು ಗ್ರಾ.ಪಂ(ನಿವೃತ್ತ), ಕಡೂರು ತಾಲ್ಲೂಕು
7. ಶ್ರೀ ಎಸ್.ಬಿ. ಪಾಟೀಲ, ಹಿಂದಿನ ಗ್ರಾಪಂ ಕಾರ್ಯದರ್ಶಿ, ಹಿರೇನಲ್ಲೂರು ಗ್ರಾ.ಪಂ(ಪ್ರಭಾರ ಪಿಡಿಓ) ಕಡೂರು ತಾಲ್ಲೂಕು
8. ಶ್ರೀ ರೇಣುಕಪ್ಪ, ಹಿಂದಿನ ಗ್ರಾಪಂ ಕಾರ್ಯದರ್ಶಿ, ಗ್ರೇಡ್-2 ಹಿರೇನಲ್ಲೂರು ಗ್ರಾ.ಪಂ ಕಡೂರು ತಾಲ್ಲೂಕು

ಪ್ರಸ್ತಾವನೆಯನ್ನು ಪರಿಶೀಲಿಸಿ ಪ್ರಕರಣದಲ್ಲಿ ಭಾಗಿಯಾಗಿರುವರೆನ್ನಲಾದ ಮೇಲ್ಕಂಡ ಅಧಿಕಾರಿ/ನೌಕರರುಗಳು ಎಸಗಿರುವ ಕರ್ತವ್ಯಲೋಪಗಳ ಬಗ್ಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಗಳು 1957 ರ ನಿಯಮ 11 ರಡಿ ಮತ್ತು ಕ್ರಮ ಸಂಖ್ಯೆ: 6 ರ ಶ್ರೀ ಮಹೇಶ್ವರಪ್ಪ, ಹಿಂದಿನ ಗ್ರಾಪಂ ಕಾರ್ಯದರ್ಶಿ, ಹಿರೇನಲ್ಲೂರು ಗ್ರಾ.ಪಂ(ನಿವೃತ್ತಿ), ಕಡೂರು ತಾಲ್ಲೂಕು ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 214 ರಡಿ ಶಿಸ್ತು ಕ್ರಮ ಜರುಗಿಸಲು ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಕಾರಣ ಕೇಳುವ ನೋಟೀಸಿನೊಂದಿಗೆ ದೋಷಾರೋಪಣಾ ಪಟ್ಟಿಯ ಅನುಬಂಧ 1 ರಿಂದ 4 ನ್ನು ಜಾರಿ ಮಾಡಲಾಗಿತ್ತು. ಸದರಿ ನೋಟೀಸಿಗೆ ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ಆರೋಪಿತ ಅಧಿಕಾರಿ/ನೌಕರರುಗಳು ಲಿಖಿತ ರಕ್ಷಣಾ ಹೇಳಿಕೆಗಳನ್ನು ಸಲ್ಲಿಸಿ ತಮ್ಮ ವಿರುದ್ಧದ ಆರೋಪಗಳನ್ನು ನಿರಾಕರಿಸಿರುತ್ತಾರೆ. ಅವರುಗಳ

ಲಿಖಿತ ಹೇಳಿಕೆಗಳನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿದ್ದು, ಅಪಾದಿತರ ಲಿಖಿತ ಹೇಳಿಕೆಗಳನ್ನು ಒಪ್ಪಲು ಸಮರ್ಥನೀಯವಾದ ಅಂಶಗಳು ಕಂಡು ಬಾರದಿರುವುದರಿಂದ ಅವರುಗಳ ವಿರುದ್ಧದ ಆರೋಪಗಳ ಕುರಿತಂತೆ ಸತ್ಯಾಸತ್ಯತೆಯನ್ನು ತಿಳಿಯಲು ವಿವರವಾದ ಜಂಟಿ ಇಲಾಖಾ ವಿಚಾರಣೆ ನಡೆಸಲು ಸರ್ಕಾರವು ನಿರ್ಧರಿಸಿ ಈ ಕೆಳಗಿನಂತೆ ಆದೇಶಿಸಿದೆ.

<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 215 ವಿಸೇಬಿ 2012 ಬೆಂಗಳೂರು ದಿನಾಂಕ:24-02-2015</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ ಸರ್ಕಾರವು ಈ ಕೆಳಕಂಡ ಅಧಿಕಾರಿ/ನೌಕರರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11 ರ ಅನುಸಾರ ಮತ್ತು ಸದರಿ ನಿಯಮಗಳ ನಿಯಮ 13 ರಡಿಯಲ್ಲಿ ಜಂಟಿ ಇಲಾಖಾ ವಿಚಾರಣೆ ನಡೆಸಲು ಆದೇಶಿಸಿದೆ.

1. ಶ್ರೀ ಟಿ.ಎನ್. ಮೂರ್ತಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಪಂ., ಕಡೂರು
2. ಶ್ರೀ ಶಂಕರ್ ನಾಯಕ್, ಹಿಂದಿನ ಸಕಾಇಂ. ಪಂ. ರಾಜ್ ಇಂ. ಉಪ ವಿಭಾಗ ಕಡೂರು ತಾಲ್ಲೂಕು
3. ಡಾ: ನಂದಾ, ಹಿಂದಿನ ಆಡಳಿತಾಧಿಕಾರಿ, ಗ್ರಾಮ ಪಂಚಾಯತಿ, ಹಿರೇನಲ್ಲೂರು, ಕಡೂರು ತಾಲ್ಲೂಕು
4. ಶ್ರೀ ಎ. ನಾಗರಾಜ್ ಹಿಂದಿನ ಕಿ. ಅ. ಪಂ.ರಾಜ್ ಇಂ. ಉಪ ವಿಭಾಗ, ಕಡೂರು
5. ಶ್ರೀ ದೇವೆಂದ್ರಪ್ಪ, ಹಿಂದಿನ ಕಿ. ಅ. ಪಂ.ರಾಜ್ ಇಂ. ಉಪ ವಿಭಾಗ, ಕಡೂರು
6. ಶ್ರೀ ಮಹೇಶ್ವರಪ್ಪ, ಹಿಂದಿನ ಗ್ರಾಪಂ ಕಾರ್ಯದರ್ಶಿ, ಹಿರೇನಲ್ಲೂರು ಗ್ರಾ.ಪಂ(ನಿವೃತ್ತ), ಕಡೂರು ತಾಲ್ಲೂಕು
7. ಶ್ರೀ ಎಸ್.ಬಿ. ಪಾಟೀಲ, ಹಿಂದಿನ ಗ್ರಾಪಂ ಕಾರ್ಯದರ್ಶಿ, ಹಿರೇನಲ್ಲೂರು ಗ್ರಾ.ಪಂ(ಪ್ರಭಾರ ಪಿಡಿಓ) ಕಡೂರು ತಾಲ್ಲೂಕು
8. ಶ್ರೀ ರೇಣುಕಪ್ಪ, ಹಿಂದಿನ ಗ್ರಾಪಂ ಕಾರ್ಯದರ್ಶಿ, ಗ್ರೇಡ್-2 ಹಿರೇನಲ್ಲೂರು ಗ್ರಾ.ಪಂ ಕಡೂರು ತಾಲ್ಲೂಕು

ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11 ರ ಪ್ರಕಾರ ಇಲಾಖಾ ವಿಚಾರಣೆಯನ್ನು ನಡೆಸಲು, ಅದೇ ನಿಯಮಾವಳಿಗಳ ನಿಯಮ 11(2) ರ ಪ್ರಕಾರ ಶ್ರೀ ರಾಮಚಂದ್ರರಾವ್, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಬೆಂಗಳೂರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಿದೆ.

ಶಿಸ್ತು ಪ್ರಾಧಿಕಾರಿಯ ಪರವಾಗಿ ಪ್ರಕರಣವನ್ನು ವಿಚಾರಣಾಧಿಕಾರಿಯವರ ಮುಂದೆ ಮಂಡಿಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11(5)(ಸಿ) ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಸಹಾಯಕ ಕಾರ್ಯದರ್ಶಿ ಜಿಲ್ಲಾ ಪಂಚಾಯತಿ, ಚಿಕ್ಕಮಗಳೂರು ಇವರನ್ನು ಮಂಡನಾಧಿಕಾರಿಯಾಗಿ ನೇಮಿಸಿದೆ.

ವಿಚಾರಣಾಧಿಕಾರಿಯವರು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11 ರಲ್ಲಿ ನಿಗದಿ ಪಡಿಸಿರುವ ಕಾರ್ಯವಿಧಾನದ ಪ್ರಕಾರ ಇಲಾಖಾ ವಿಚಾರಣೆ ಜರುಗಿಸಿ ಪ್ರತಿಯೊಂದು ಆರೋಪಗಳಿಗೆ ಸಂಬಂಧಿಸಿದಂತೆ ಸ್ಪಷ್ಟ ಅಭಿಪ್ರಾಯದೊಂದಿಗೆ ವಿಚಾರಣಾ ವರದಿಯನ್ನು 3 ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ವಿಚಾರಣಾಧಿಕಾರಿಗಳಿಗೆ ಸೂಕ್ತ ಸ್ಥಳಾವಕಾಶ, ಶೀಘ್ರಲಿಪಿಗಾರರ ಸೇವೆ ಹಾಗೂ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು(ಗ್ರಾ) ಇವರು ಕ್ರಮ ಕೈಗೊಳ್ಳತಕ್ಕದ್ದು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ/6/ ಸೇಇವಿ/2010 ದಿನಾಂಕ: 28-04-2011 ರನ್ವಯ ವಾಹನ ಭತ್ಯೆಯೂ ಸೇರಿದಂತೆ ರೂ. 15,000/- ಗಳ ಸಂಭಾವನೆಯನ್ನು ಪಡೆಯಲು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಿದ್ದಮಲ್ಲಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇ.ಬಿ&ಸಿ)(ಪ್ರ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು,(ಎ & ಇ)) ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿಕ್ಕಮಗಳೂರು/ಬೆಂಗಳೂರು(ಗ್ರಾ)
3. ಶ್ರೀ ಹೆಚ್.ವಿ. ರಾಮಚಂದ್ರರಾವ್, ನಿವೃತ್ತ ನ್ಯಾಯಾಧೀಶರು, ಪ್ಲಾಟ್; ನಂ.ಎಸ್-8, 3ನೇ ಮಹಡಿ, ಫರ್ಲಾನೇಚರ್, ಸೈಟ್ ನಂ.11, ಭೂಪಸಂದ್ರ ಮುಖ್ಯ ರಸ್ತೆ, ನಾಗಶೆಟ್ಟಿ ಹಳ್ಳಿ, ಬೆಂಗಳೂರು-94 (ಮೊ.ನಂ. 9448388898)
4. ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತಿ, ಚಿಕ್ಕಮಗಳೂರು ( ಮಂಡನಾಧಿಕಾರಿ).
5. ಆಪಾದಿತ ಅಧಿಕಾರಿ/ನೌಕರರುಗಳಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿಕ್ಕಮಗಳೂರು ಇವರ ಮುಖಾಂತರ)
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಕಾರ್ಯದರ್ಶಿ(ಪಂ.ರಾಜ್)/ಅಪರ ಕಾರ್ಯದರ್ಶಿ (ಆಡಳಿತ), ಗ್ರಾ .ಅ. & ಪಂ.ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
7. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.